**Akashvani : Bangalore**
**Regional Bulletin In Kannada**
**18.01.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**18.01.2025 / 18.40 hrs**

ಮುಖ್ಯಾಂಶಗಳು

**೧. ರಾಜ್ಯದ ಸಚಿವರೊಂದಿಗೆ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಸಭೆ ; ಕೇಂದ್ರದ ಯೋಜನೆಗಳ ಕುರಿತು ಪರಾಮರ್ಶೆ**

**೨. ಊಹಾ ಪತ್ರಿಕೋದ್ಯಮ ಅತ್ಯಂತ ಅಪಾಯಕಾರಿ - ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಮತ**

**೩. ಮೈಸೂರು ವಿಶ್ವವಿದ್ಯಾಲಯದ ೧೦೫ನೇ ವಾರ್ಷಿಕ ಘಟಿಕೋತ್ಸವ - ಸುಧಾಮೂರ್ತಿ ಸೇರಿ ಮೂವರಿಗೆ ಗೌರವ ಡಾಕ್ಟರೇಟ್ ಪ್ರದಾನ**

**೪. ಗದಗ ಜಿಲ್ಲೆಯ ಮುಂಡರಗಿಯಲ್ಲಿ ತುಂಗಭದ್ರಾ ನದಿ ನೀರು ಕುಡಿಯದಂತೆ ಜಿಲ್ಲಾಡಳಿತ ಸೂಚನೆ**

**೫. ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮದಲ್ಲಿ ನಾಳೆ ಪ್ರಧಾನಿ ನರೇಂದ್ರ ಮೋದಿ ಮನದ ಮಾತು**

**<><*<><>*><>**

ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರ ಕೋರಿಕೆಯಂತೆ ರಾಜ್ಯಕ್ಕೆ ೯೭ ಕೋಟಿ ರೂಪಾಯಿಗಳ ಹೆಚ್ಚುವರಿ ಅನುದಾನ ಒದಗಿಸಲಾಗುವುದು ಎಂದು ಕೇಂದ್ರ ಕೃಷಿ, ರೈತ ಕಲ್ಯಾಣ ಮತ್ತು ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ರಾಜ್ಯದ ಕೃಷಿ, ಗ್ರಾಮೀಣ ಮತ್ತು ಕಂದಾಯ ಸಚಿವರೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಕೇಂದ್ರ ಸರ್ಕಾರ ಮಂಜೂರು ಮಾಡಿದ ಹಣವನ್ನು ರಾಜ್ಯ ಸರ್ಕಾರ ಇನ್ನು ಬಳಸಿಕೊಂಡಿಲ್ಲ ಎಂದು ಆರೋಪಿಸಿದ್ದಾರೆ.ಇದೇ ವೇಳೆ ಅಡಕೆ ಬೆಳೆಗಾರರನ್ನು ಭೇಟಿ ಮಾಡಲು ಶಿವಮೊಗ್ಗಕ್ಕೆ ತೆರಳುವುದಾಗಿ ತಿಳಿಸಿದ್ದಾರೆ. ರಾಜ್ಯದಲ್ಲಿ ೨ ಲಕ್ಷ ೫೭ ಸಾವಿರದ ೨೪೬ ಮನೆಗಳ ನಿರ್ಮಾಣಕ್ಕೆ ಕೇಂದ್ರ ಸರ್ಕಾರ ಸೆಪ್ಟೆಂಬರ್‌ನಲ್ಲಿ ಅನುಮೋದನೆ ನೀಡಿದೆ. ಈಗ ಈ ಸಂಖ್ಯೆಯನ್ನು ೪ ಲಕ್ಷ ೬೭ ಸಾವಿರದ ೫೮೦ಕ್ಕೆ ಹೆಚ್ಚಿಸಲಾಗಿದೆ ಎಂದು ಹೇಳಿದ್ದಾರೆ.

<><*<><>*><>

ಪ್ರಸ್ತುತ ದಿನಗಳಲ್ಲಿ ವಸ್ತು ಸ್ಥಿತಿ ಜೊತೆಗೆ ಮೌಲ್ಯಧಾರಿತ ಸುದ್ಧಿ ಅತ್ಯಗತ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಪಾದಿಸಿದ್ದಾರೆ. ಕಾರ್ಯನಿರತ ಪತ್ರಕರ್ತರ ಸಂಘ ತುಮಕೂರು ಸಿದ್ಧಾರ್ಥ ತಾಂತ್ರಿಕ ವಿಶ್ವ ವಿದ್ಯಾಲಯದಲ್ಲಿ ಆಯೋಜಿಸಿದ್ದ ರಾಜ್ಯ ಪತ್ರಕರ್ತರ ೩೯ನೇ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅವರು, ಊಹಾ ಪತ್ರಿಕೋದ್ಯಮ ಅಪಾಯಕಾರಿ ಎಂದು ಅಭಿಪ್ರಾಯಪಟ್ಟಿದ್ದಾರೆ.

**ಧ್ವನಿ : ಸಿದ್ದರಾಮಯ್ಯ, ಮುಖ್ಯಮಂತ್ರಿ**

ವಿಜ್ಞಾನ, ತಂತ್ರಜ್ಞಾನದ ವೇಗದಲ್ಲೇ ಪತ್ರಿಕೋದ್ಯಮ ಬೆಳೆಯುತ್ತಿದ್ದು, ಇದು ಅವಕಾಶ ಹಾಗೂ ಸವಾಲು ಎರಡೂ ಆಗಿದೆ ಎಂದು ತಿಳಿಸಿದ್ದಾರೆ. ಗ್ರಾಮೀಣ ಪತ್ರಕರ್ತರ ಉಚಿತ ಬಸ್ ಪಾಸ್ ಸದ್ಯದಲ್ಲೇ ನಿಮ್ಮ ಕೈ ಸೇರಲಿದ್ದು, ಪತ್ರಕರ್ತರ ಕುಟುಂಬಕ್ಕೆ ಆರೋಗ್ಯ ವಿಮೆ ನೀಡುವ ಬಗ್ಗೆ ತೀರ್ಮಾನ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

<><*<><>*><>

ಮಹಾತ್ಮಗಾಂಧಿ ವಿಚಾರಧಾರೆಗಳನ್ನು ದೇಶದ ಮೂಲೆಮೂಲೆಗೆ ತಿಳಿಸುವ ಉದ್ದೇಶದಿಂದ ಜೈಬಾಪು, ಜೈ ಭೀಮ್, ಜೈ ಸಂವಿಧಾನ ಸಮಾವೇಶವನ್ನು ಬೆಳಗಾವಿಯಲ್ಲಿ ಆಯೋಜಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಕಾರವಾರ, ಗದಗ, ಹುಬ್ಬಳ್ಳಿ-ಧಾರವಾಡ ಜನಪ್ರತಿನಿಧಿಗಳ ಪೂರ್ವಭಾವಿ ಸಭೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಸಮಾವೇಶ ಇತಿಹಾಸದ ಪುಟ ಸೇರ್ಪಡೆಯಾಗಲಿದೆ ಎಂದು ಅವರು ತಿಳಿಸಿದ್ದಾರೆ.

**ಧ್ವನಿ : ಡಿ.ಕೆ. ಶಿವಕುಮಾರ್**

ಇದೇ ವೇಳೆ ರಾಜ್ಯದ ೧೦೦ ಕಾಂಗ್ರೆಸ್ ಕಚೇರಿಗಳಿಗೆ ಭೂಮಿಪೂಜೆ ನೆರವೇರಿಸಲು ಸಿದ್ಧತೆ ನಡೆಸಲಾಗಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಇಡಿ ೩೦೦ ಕೋಟಿ ಆಸ್ತಿ ಜಪ್ತಿ ಮಾಡಿದ ಕುರಿತಂತೆ ಪ್ರತಿಕ್ರಿಯಿಸಿದ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಈ ಆರೋಪಗಳಿಗೆ ಯಾವುದೇ ಆಧಾರವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಮೈಸೂರು ವಿಶ್ವವಿದ್ಯಾನಿಲಯದ ೧೦೫ ನೇ ವಾರ್ಷಿಕ ಘಟಿಕೋತ್ಸವ ಇಂದು ನಡೆಯಿತು. ಸಮಾರಂಭದಲ್ಲಿ ಡಾ. ಎ.ಸಿ. ಷಣ್ಮುಗಮ್, ಶಾಹಿನ್ ಮಜೀದ್ ಹಾಗೂ ಸುಧಾಮೂರ್ತಿ ಅವರಿಗೆ ಗೌರವ ಡಾಕ್ಟರೇಟ್ ನೀಡಿ ಗೌರವಿಸಲಾಯಿತು. ಘಟಿಕೋತ್ಸವದಲ್ಲಿ ೩೧ ಸಾವಿರದ ೬೮೯ ಅಭ್ಯರ್ಥಿಗಳಿಗೆ ವಿವಿಧ ಪದವಿಗಳನ್ನು ಪ್ರದಾನ ಮಾಡಲಾಯಿತು. ಈ ಪೈಕಿ ೨೦ ಸಾವಿರದ ೨೨ ಮಹಿಳೆಯರು, ೧೧ ಸಾವಿರದ ೬೬೭ ಪುರುಷರಿಗೆ ಪದವಿ ಪ್ರದಾನ ಮಾಡಲಾಯಿತು. ವಿವಿಧ ವಿಷಯಗಳಲ್ಲಿ ೧೧೧ ಅಭ್ಯರ್ಥಿಗಳಿಗೆ ಪಿ.ಹೆಚ್.ಡಿ ಪದವಿ ಪ್ರದಾನ ಮಾಡಲಾಯಿತು. ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವ ಡಾ ಎಂ.ಸಿ. ಸುಧಾಕರ್, ವಿದೇಶಗಳಲ್ಲಿ ವಿವಿಧ ಪ್ರಮುಖ ಹುದ್ದೆಗಳಲ್ಲಿ ಭಾರತೀಯರೇ ಕಾರ್ಯನಿರ್ವಹಿಸುತ್ತಿದ್ದು, ನಮ್ಮ ಶಿಕ್ಷಣದ ವ್ಯವಸ್ಥೆ ಎಷ್ಟು ಗಟ್ಟಿಯಾಗಿದೆ ಎಂಬುದಕ್ಕೆ ಇದು ಸಾಕ್ಷಿಯಾಗಿದೆ ಎಂದು ಹೇಳಿದರು.

<><*<><>*><>

ರಾಜ್ಯದಲ್ಲಿ ದರೋಡೆ ಪ್ರಕರಣಗಳು ಹೆಚ್ಚುತ್ತಿದ್ದು, ಜನರು ಆತಂಕದಲ್ಲಿ ಬದುಕುತ್ತಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆತಂಕ ವ್ಯಕ್ತಪಡಿಸಿದ್ದಾರೆ. ವಿಧಾನಸೌಧದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜ್ಯದ ಪೊಲೀಸರ ಬಗ್ಗೆ ಯಾರಿಗೂ ಭಯವಿಲ್ಲದಂತಾಗಿದೆ. ಪೊಲೀಸ್ ಇಲಾಖೆ ವರ್ಗಾವಣೆಯಲ್ಲಿ ತೊಡಗಿದೆ ಎಂದು ದೂರಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಎಷ್ಟು ಅನುದಾನ ನೀಡಿದ್ದಾರೆ ಎಂಬ ಬಗ್ಗೆ ಶ್ವೇತಪತ್ರ ಬಿಡುಗಡೆ ಮಾಡುವಂತೆ ಆಗ್ರಹಿಸಿದ್ದಾರೆ.

<><*<><>*><>

ಗದಗ ಜಿಲ್ಲೆಯ ಮುಂಡರಗಿ ತಾಲೂಕಿನ ತುಂಗಾ ಭದ್ರ ನದಿಯ ನೀರು ಹಸಿರು ಬಣ್ಣಕ್ಕೆ ತಿರುಗುತ್ತಿದೆ. ಈ ನೀರು ಕುಡಿಯಲು ಯೋಗ್ಯವಾಗಿಲ್ಲದ ಕಾರಣ ನದಿ ಪಾತ್ರದ ಗಂಗಾಪೂರ ಮತ್ತು ಕೋರ್ಲಹಳ್ಳಿಯ ಜನತೆ ಮತ್ತು ಜಾನುವಾರುಗಳು ಬಳಸಬಾರದು ಎಂದು ಗದಗ ಉಪವಿಭಾಗಾಧಿಕಾರಿ ಗಂಗಪ್ಪ ಎಂ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ನದಿ ನೀರನ್ನು ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯ ಪ್ರಯೋಗಾಲಯಕ್ಕೆ ಕಳುಹಿಸಲಾಗಿತ್ತು. ತುಂಗ ಭದ್ರ ನದಿಯ ನೀರು ಕುಡಿಯಲು ಯೋಗ್ಯವಾಗಿಲ್ಲ ಎಂದು ಮಂಡಳಿಯು ಜಿಲ್ಲಾಡಳಿತಕ್ಕೆ ವರದಿ ನೀಡಿದೆ ಎಂದು ಅವರು ಹೇಳಿದ್ದಾರೆ.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್' ಮೂಲಕ ನಾಳೆ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಚಿಂತನೆಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್ ಕಾರ್ಯಕ್ರಮದ ೧೧೮ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಬಿತ್ತರಗೊಳ್ಳಲಿದೆ. ಅಲ್ಲದೆ ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿ ನೇರ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಯಲ್ಲಿ ಕಾರ್ಯಕ್ರಮವನ್ನು ಪ್ರಸಾರವಾಗಲಿದೆ.

**<><*<><>*><>**

ಬಿಹಾರದ ಪಾಟ್ನಾದಲ್ಲಿ ಇದೇ ೨೦ ಮತ್ತು ೨೧ರಂದು ನಡೆಯಲಿರುವ ೮೫ನೇ ಅಖಿಲ ಭಾರತ ವಿಧಾನ ಸಭಾಧ್ಯಕ್ಷರ ಸಮ್ಮೇಳನದಲ್ಲಿ ರಾಜ್ಯ ವಿಧಾನ ಸಭೆಯ ಸಭಾಧ್ಯಕ್ಷ ಯು.ಟಿ.ಖಾದರ್ ಭಾಗವಹಿಸಲಿದ್ದಾರೆ. ಈ ಸಮ್ಮೇಳನದಲ್ಲಿ ಅವರು, ಸಾಂವಿಧಾನಿಕ ಮೌಲ್ಯಗಳನ್ನು ಬಲಪಡಿಸುವಲ್ಲಿ ಸಂಸತ್ತು ಮತ್ತು ರಾಜ್ಯ ಶಾಸಕಾಂಗ ಸಂಸ್ಥೆಗಳ ಕೊಡುಗೆಯ ಬಗ್ಗೆ ವಿಷಯ ಮಂಡಿಸಲಿದ್ದಾರೆ. ಈ ಸಮ್ಮೇಳನದಲ್ಲಿ ಭಾರತದ ಎಲ್ಲಾ ರಾಜ್ಯಗಳ ಸಭಾಧ್ಯಕ್ಷರು ಹಾಗೂ ಕಾರ್ಯದರ್ಶಿಗಳು ಭಾಗವಹಿಸಲಿದ್ದಾರೆ ಎಂದು ವಿಧಾನ ಸಭೆಯ ಕಾರ್ಯದರ್ಶಿ ಎಂ.ಕೆ.ವಿಶಾಲಾಕ್ಷಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**<><*<><>*><>**

ಬೀದರ್ ನ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಶ್ವವಿದ್ಯಾಲಯದ ೨೦ನೇ ಸಂಸ್ಥಾಪನಾ ದಿನಾಚರಣೆ ಹಾಗೂ ಮೂರು ದಿನಗಳ ಜಾನುವಾರು, ಕುಕ್ಕುಟ ಮತ್ತು ಮತ್ಸ್ಯ ಮೇಳಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಬೀದರ್‌ನಲ್ಲಿಂದು ಚಾಲನೆ ನೀಡಿದರು. ಇದೇ ವೇಳೆ, ಕೈಪಿಡಿ ಬಿಡುಗಡೆ ಮಾಡಿ, ಸಾಧಕರನ್ನು ಸನ್ಮಾನಿಸಿದರು. ಬಳಿಕ ಮಾತನಾಡಿದ ಸಚಿವರು, ಬೀದರ್ ಜಿಲ್ಲೆಯಲ್ಲಿ ಪ್ರತಿನಿತ್ಯ ಒಂದೂವರೆ ಲಕ್ಷ ಲೀಟರ್ ಹಾಲು ಉತ್ಪಾದನೆಯಾಗುತ್ತಿದೆ. ಅದರಲ್ಲಿ ೫೦ ರಿಂದ ೬೦ ಲೀಟರ್ ಹಾಲನ್ನು ಕೆಎಂಎಫ್ ಖರೀದಿ ಮಾಡುತ್ತಿದ್ದು, ಇನ್ನುಳಿದ ಹಾಲಿನಿಂದ ಉಪ ಉತ್ಪನ್ನಗಳ ತಯಾರಿಕೆಗೆ ಆದ್ಯತೆ ನೀಡಬೇಕು ಎಂದು ಹೇಳಿದರು.

**<><*<><>*><>**

ರಾಮನಗರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀನಿವಾಸ್ ಗೌಡ ಅವರು, ಜಿಲ್ಲಾ ಪೊಲೀಸ್ ಕಚೇರಿಯಲ್ಲಿ ಇಂದು ನಗರ ಮತ್ತು ಗ್ರಾಮಾಂತರ ವ್ಯಾಪ್ತಿಯಲ್ಲಿನ ಬ್ಯಾಂಕ್ ಮ್ಯಾನೇಜರ್‌ಗಳ ಜೊತೆ ಸಭೆ ನಡೆಸಿದರು. ಈ ವೇಳೆ ಬ್ಯಾಂಕ್ ಮತ್ತು ಎಟಿಎಂ ಕೇಂದ್ರಗಳಲ್ಲಿ ಸೂಕ್ತ ಭದ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿದರು. ಜಿಲ್ಲಾ ವ್ಯಾಪ್ತಿಯಲ್ಲಿ ಒಳಪಡುವ ಎಲ್ಲಾ ಬ್ಯಾಂಕ್ ಹಾಗೂ ಎಟಿಎಂಗಳಿಗೆ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿ ಭೇಟಿ ನೀಡಿ, ಭದ್ರತೆ ಕುರಿತು ಅಗತ್ಯ ಸಲಹೆ ಸೂಚನೆಗಳನ್ನು ನೀಡುವಂತೆ ನಿರ್ದೇಶನ ನೀಡಿದ್ದಾರೆ.

**<><*<><>*><>**

ಉತ್ತಮ ಆಡಳಿತ ವ್ಯವಸ್ಥೆಯಲ್ಲಿ ನ್ಯಾಯಾಂಗದ ಕೊಡುಗೆ ಬಹಳ ಮುಖ್ಯವಾಗಿದೆ ಎಂದು ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಎಚ್.ಪಿ.ಸಂದೇಶ್ ತಿಳಿಸಿದ್ದಾರೆ. ಬಾಗಲಕೋಟೆ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ಇಂದು ಜಿಲ್ಲಾ ನ್ಯಾಯಾಂಗ, ಲೋಕೋಪಯೋಗಿ ಇಲಾಖೆ ಹಾಗೂ ವಕೀಲರ ಸಂಘದ ಸಹಯೋಗದಲ್ಲಿ ಹೆಚ್ಚುವರಿ ನ್ಯಾಯಾಲಯಗಳ ಕಟ್ಟಡ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು. ಆಡಳಿತ ವ್ಯವಸ್ಥೆಯಲ್ಲಿ ಕೇವಲ ನ್ಯಾಯಾಂಗ ಉತ್ತಮವಾಗಿ ಕೆಲಸ ಮಾಡಿದರೆ ಸಾಲದು ಕಾರ್ಯಾಂಗ ಮತ್ತು ಶಾಸಕಾಂಗ ಸಹ ಕೈಜೋಡಿಸಬೇಕು ಎಂದು ತಿಳಿಸಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**